ದೂರವಾಣಿ : 080 - 22263479

ಬೆಂ.ಮ.ಪ್ರಪ್ರಾ.

# ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರ

ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ನಂ. 1, ಅಲಿ ಅಸ್ಕರ್ ರಸ್ತೆ, ಬೆಂಗಳೂರು – 560 052.

ಸಂಖ್ಯೆ: STRRPA/TP/CC/137/2017-18 ದಿನಾಂಕ: 12.12.2017

## ಪ್ರಾರಂಭಿಕ ಪ್ರಮಾಣ ಪತ್ರ

**ನಮೂನೆ- III**

**ನಿಯಮ- 35**

**ವಿಷಯ:** ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಸರ್ಜಾಪುರ ಗ್ರಾಮದ ಸ.ನಂ. 431ರಲ್ಲಿ ಅನುಮೋದನೆಯಾಗಿರುವ ವಸತಿ ಅಭಿವೃದ್ಧಿ ನಕ್ಷೆಯ ಖಾತೆ ಸಂಖ್ಯೆ: 150200102300122656ರಲ್ಲಿನ 8903.08ಚ.ಮೀ. ವಿಸ್ತೀರ್ಣದ ನಿವೇಶನದಲ್ಲಿ ಸಿಲ್ಟ್+ನೆಲ+ ಮೂರು ಅಂತಸ್ತುಗಳ ಒಟ್ಟು 264 ವಸತಿ ಘಟಕಗಳ ಕಟ್ಟಡ ನಕ್ಷೆಗಳನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 15(1)ರ ಅಡಿಯಲ್ಲಿ ಅನುಮೋದಿಸಿ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:**
1. ಈ ಪ್ರಾಧಿಕಾರಕ್ಕೆ ಮೆ॥ ಸೌಪರ್ಣಿಕ ಪ್ರಾಜೆಕ್ಟ್ಸ್ ಮತ್ತು ಇನ್‌ಫ್ರಾಸ್ಟ್ರಕ್ಚರ್ ಪ್ರೈ. ಲಿ, ರವರ ದಿನಾಂಕ: 12.10.2017ರ ಅರ್ಜಿ.
2. ಈ ಪ್ರಾಧಿಕಾರಕ್ಕೆ ಪಾವತಿಸಲಾದ ಪರಿಶೀಲನಾ ಶುಲ್ಕ ರೂ. 1,000/–, ಉತ್ತಮತೆ ಶುಲ್ಕ ರೂ. 1,11,900/– ನಕ್ಷೆ ಶುಲ್ಕ ರೂ. 5,000/– ಭದ್ರತಾ ಠೇವಣಿ ರೂ. 11,18,950/– ಮತ್ತು ಕೆರೆ ಸಂರಕ್ಷಣಾ ಶುಲ್ಕ ರೂ.4150/– ರಸೀದಿ ಸಂಖ್ಯೆ: 407 ಮತ್ತು 408 ದಿನಾಂಕ: 08.12.2017.

*******

ಮೇಲ್ಕಂಡ ವಿಷಯದಲ್ಲಿರುವ ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಸರ್ಜಾಪುರ ಗ್ರಾಮದ ಸ.ನಂ. 431ರಲ್ಲಿ ಅನುಮೋದನೆಯಾಗಿರುವ ಏಕನಿವೇಶನ ವಿನ್ಯಾಸದಲ್ಲಿ ಸಿಲ್ಟ್+ನೆಲ+ ಮೂರು ಅಂತಸ್ತುಗಳ ಒಟ್ಟು 264 ಘಟಕಗಳಲ್ಲಿ ವಸತಿ ಉಪಯೋಗದ ಬಹುಮಹಡಿ ಕಟ್ಟಡದ ಒಟ್ಟು 22378.00ಚ.ಮೀ. ವಿಸ್ತೀರ್ಣದಲ್ಲಿ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ಮೆ॥ ಸೌಪರ್ಣಿಕ ಪ್ರಾಜೆಕ್ಟ್ಸ್ ಮತ್ತು ಇನ್‌ಫ್ರಾಸ್ಟ್ರಕ್ಚರ್ ಪ್ರೈ. ಲಿ. ನ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಮೀನಾಕ್ಷಿ ರಾಂಜಿ ಇವರಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 15(1) ರನ್ವಯ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಪ್ರಾರಂಭಿಕ ಪ್ರಮಾಣ ಪತ್ರ ನೀಡಿದೆ.

### ಷರತ್ತುಗಳು

1) ಇದು ಕಟ್ಟಡ ನಿರ್ಮಾಣದ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 15(1)ರಡಿ ನೀಡಲಾಗಿರುವ ಪ್ರಾರಂಭಿಕ ಪ್ರಮಾಣ ಪತ್ರವಾಗಿರುತ್ತದೆ. ಈ ಪ್ರಾರಂಭಿಕ ಪ್ರಮಾಣ ಪತ್ರವು ಮಾಲೀಕತ್ವದ ದೃಢೀಕರಣ/ರುಜುವಾತು ಪತ್ರವಾಗಿರುವುದಿಲ್ಲ.
2) ಸದರಿ ನಿವೇಶನದಲ್ಲಿ ಕಟ್ಟುವ ಕಟ್ಟಡವನ್ನು ಈ ಕಛೇರಿಯಿಂದ ಅನುಮತಿ ನೀಡಿರುವಂತೆ ವಸತಿ ಉಪಯೋಗಕ್ಕೆ ಮಾತ್ರ ಉಪಯೋಗಿಸತಕ್ಕದ್ದು ಮತ್ತು ಕಟ್ಟಡವನ್ನು ಅನುಮೋದಿತ ನಕ್ಷೆಯಂತೆ ನಿರ್ಮಿಸತಕ್ಕದ್ದು.
3) ಕಟ್ಟಡ ನಿರ್ಮಾಣವು ಜಾರಿಯಲ್ಲಿರುವ ವಲಯ ನಿಯಮಾವಳಿಗಳು ಮತ್ತು ಕಟ್ಟಡದ ವಿಧಿಗಳ ನಿಬಂಧನೆಗಳಿಗೆ ಅನುಗುಣವಾಗಿರತಕ್ಕದ್ದು.

..2..

4) ಈ ಪ್ರಾರಂಭಿಕ ಪ್ರಮಾಣ ಪತ್ರವು ಮಂಜೂರಾದ ದಿನಾಂಕದಿಂದ ಎರಡು ವರ್ಷದವರೆಗೆ ಮಾತ್ರ ಮಾನ್ಯತೆ ಹೊಂದಿರುತ್ತದೆ. ಈ ಅವಧಿ ಮುಗಿದ ನಂತರ ಹೊಸದಾಗಿ ಪ್ರಾರಂಭಿಕ ಪ್ರಮಾಣ ಪತ್ರ ಪಡೆಯದೆ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಹಾಗೂ ಮುಂದುವರೆಸಬಾರದು.

5) ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ನಿಯೋಜಿಸಿಕೊಳ್ಳತಕ್ಕದಲ್ಲ ಹಾಗೂ ಕಾರ್ಮಿಕರ ಕಲ್ಯಾಣ ನಿಧಿಗೆ ಪಾವತಿಸಬೇಕಾದ ಶುಲ್ಕವನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯಿಂದ ಪರವಾನಗಿ ಪಡೆಯುವ ಸಮಯದಲ್ಲಿ ಕಡ್ಡಾಯವಾಗಿ ಪಾವತಿಸತಕ್ಕದ್ದು.

6) ಅನುಮೋದಿತ ನಕ್ಷೆಯನ್ನು ಉಲ್ಲಂಘಿಸಿ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಮತ್ತು ಏನಾದರೂ ಬದಲಾವಣೆಗಳು ಅವಶ್ಯವಿದ್ದಲ್ಲಿ ಮಾರ್ಪಾಡಿತ ನಕ್ಷೆಗೆ ಮಂಜೂರಾತಿ ಪಡೆದು ಮುಂದುವರೆಸತಕ್ಕದ್ದು.

7) ಅನುಮೋದಿತ ಕಟ್ಟಡ ನಕ್ಷೆಯ ಒಂದು ಪ್ರತಿಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಧಿಕಾರಿಗಳ ಸಮೀಕ್ಷೆಗಾಗಿ ಪ್ರದರ್ಶಿಸತಕ್ಕದ್ದು.

8) ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ರಸ್ತೆಯಲ್ಲಿ ಶೇಖರಣೆ ಮಾಡಬಾರದು. ಈ ರೀತಿ ಮಾಡಿರುವುದು ಕಂಡು ಬಂದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರವನ್ನು ರದ್ದುಪಡಿಸಲಾಗುವುದು.

9) ಕಟ್ಟಡ ನಡುಜಾಗ ಪ್ರದೇಶದಲ್ಲಿ ಗಿಡ/ಮರಗಳನ್ನು ಬೆಳಸತಕ್ಕದ್ದು.

10) ನಿವೇಶನದ ಆವರಣದೊಳಗೆ ಮಳೆ ನೀರು ಕೊಯ್ಲನ್ನು ಕಡ್ಡಾಯವಾಗಿ ಅಳವಡಿಸತಕ್ಕದ್ದು.

11) ಕಟ್ಟಡದಲ್ಲಿ ಸೋಲಾರ್ ವಾಟರ್ ಹೀಟರ್‌ನ್ನು ಕಡ್ಡಾಯವಾಗಿ ಅಳವಡಿಸತಕ್ಕದ್ದು.

12) ಸದರಿ ನಿವೇಶನಕ್ಕೆ ಸಂಬಂಧಿಸಿದಂತೆ ಸಿವಿಲ್ ವ್ಯಾಜ್ಯಗಳು ಉದ್ಭವಿಸಿದಲ್ಲಿ ನ್ಯಾಯಾಲಯದ ತೀರ್ಮಾನಕ್ಕೆ ಬದ್ಧರಾಗಿರತಕ್ಕದ್ದು.

13) ಸದರಿ ನಿವೇಶನದಲ್ಲಿ ಸರ್ಕಾರದ/ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ, ಅಂತಹ ಸಂದರ್ಭದಲ್ಲಿ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಅನುಮೋದಿತ ಕಟ್ಟಡ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ.

14) ಪ್ರಸ್ತಾವನೆಗೆ ಸಂಬಂಧಿಸಿದಂತೆ ಅರ್ಜಿದಾರರು ತಪ್ಪು ದಾಖಲೆ ಅಥವಾ ಇನ್ನಿತರೆ ಫೋರ್ಜರಿ ದಾಖಲಾತಿಗಳನ್ನು ನೀಡಿರುವುದು ರುಜುವಾತಾದಲ್ಲಿ ಈಗ ನೀಡಿರುವ ಕಟ್ಟಡ ನಕ್ಷೆ ಅನುಮೋದನೆಯು ತನ್ನಿಂದ ತಾನೇ ರದ್ದಾಗುವುದೆಂದು ಪರಿಗಣಿಸತಕ್ಕದ್ದು.

15) ಕಟ್ಟಡ ನಿರ್ಮಾಣ ಕಾರ್ಯ ಪ್ರಾರಂಭಿಸುವ ಮುನ್ನ ಸಂಬಂಧಿತ ಸ್ಥಳೀಯ ಸಂಸ್ಥೆಯಿಂದ ಪರವಾನಗಿಯನ್ನು ಪಡೆಯತಕ್ಕದ್ದು. ಸಂಬಂಧಿಸಿದ ಇತರ ಎಲ್ಲಾ ಇಲಾಖೆ/ ಮಂಡಳಿಗಳಿಂದ ಅಗತ್ಯ ನಿರಾಕ್ಷೇಪಣಾ ಪತ್ರ/ಅನುಮತಿಯನ್ನು ಪಡೆಯತಕ್ಕದ್ದು.

16) ಪ್ರಸ್ತಾವಿತ ಪ್ರದೇಶದಲ್ಲಿ ವಿಕಲಚೇತನರಿಗೆ ಅನುಕೂಲವಾಗುವಂತೆ ಪಾದಚಾರಿ ಮಾರ್ಗವನ್ನು Lift/Ramp ನಲ್ಲಿ ಎರಡು ಚಕ್ರಗಳ ಖುರ್ಚಿ ಸರಾಗವಾಗಿ ಹೋಗಿಬರುವಂತೆ ಕಡ್ಡಾಯವಾಗಿ ನಿರ್ಮಿಸತಕ್ಕದ್ದು.

17) ಕಟ್ಟಡ ಕಾಮಗಾರಿಗಳನ್ನು ಪ್ರಾರಂಭಿಸುವ ಮುನ್ನ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪತ್ರ ಸಂಖ್ಯೆ: PCB/395/CNP/17/H 708, ದಿನಾಂಕ: 04.11.2017ರಲ್ಲಿ ವಿಧಿಸಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗತಕ್ಕದ್ದು ಮತ್ತು ನಿಬಂಧನೆಗಳನ್ನು ತಪ್ಪದೇ ಪಾಲಿಸತಕ್ಕದ್ದು.

18) ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 209 ಬಿಎಂಆರ್ 2016, ದಿನಾಂಕ: 31-03-2017ರ ರೀತ್ಯ ಪತ್ರಿಕೆ, ಮಾಧ್ಯಮ, ಜಾಹೀರಾತು ಪ್ರಕಟಣೆಗಳಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವಂತಿಲ್ಲ. ತಪ್ಪು ಮಾಹಿತಿ ಪ್ರಕಟಿಸದೇ ಅನುಮೋದನೆ ಪಡೆದುಕೊಂಡಿರುವ ಯೋಜನಾ ಪ್ರಾಧಿಕಾರದ ಹೆಸರನ್ನು ಮಾತ್ರ ನಮೂದಿಸತಕ್ಕದ್ದು.

..3..

19) ಅನುಮೋದಿತ ನಕ್ಷೆಯ ವಿವರಗಳು ಈ ಕೆಳಕಂಡಂತಿವೆ.

| | | | |
|---|---|---|---|
| i) | ಉಪಯೋಗ ವಸತಿ | | |
| ii) | ನಡುಜಾಗಗಳು | ವಲಯ ನಿಯಮಾವಳಿಯಂತೆ | ನಕ್ಷೆಯಂತೆ |
| | ಮುಂಭಾಗ | 5.0 ಮೀ. | 5.0 ಮೀ. |
| | ಹಿಂಭಾಗ | 5.0ಮೀ. | 5.0 ಮೀ. |
| | ಎಡಭಾಗ | 5.0 ಮೀ. | 5.0 ಮೀ. |
| | ಬಲಭಾಗ | 5.0 ಮೀ. | 5.0 ಮೀ. |
| iii) | ನಿವೇಶನದ ವಿಸ್ತೀರ್ಣ | - | 8903.08 ಚ.ಮೀ.ಗಳು |
| iv) | ಪ್ಲಿಂತ್ ವಿಸ್ತೀರ್ಣ | - | 4175.40 ಚ.ಮೀ.ಗಳು |
| v) | ಕ್ಷೇತ್ರಾವರಿಸುವಿಕೆ | | ಶೇ. 47% |
| vi) | ಒಟ್ಟು ಫ್ಲೋರ್ ವಿಸ್ತೀರ್ಣ | | 22378.51 ಚ.ಮೀ.ಗಳು |
| vii) | ಎಫ್.ಎ.ಆರ್. | 1.75 | 1.74 |
| viii) | ವಾಹನ ನಿಲುಗಡೆ | 206 | 206 |
| ix) | ದ್ವಿಚಕ್ರವಾಹನ ನಿಲುಗಡೆ | 708.12 ಚ.ಮೀ | 851 ಚ.ಮೀ. |
| x) | ರಸ್ತೆ ಮಾರ್ಜಿನ್ | - | - |
| xi) | ಕಟ್ಟಡ ರೇಖೆ | - | - |
| xii) | ಕಟ್ಟಡದ ಎತ್ತರ | 15.0 ಮೀ. | 14.95 ಮೀ. |

20) ಯೋಜನಾ ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ನಿಯಮಗಳು/ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.

21) ಮೇಲ್ಕಂಡ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ/ಅನುಮೋದಿತ ನಕ್ಷೆಗೆ ವ್ಯತಿರಿಕ್ತವಾಗಿ ಕಟ್ಟಡ ನಿರ್ಮಾಣ ಕೈಗೊಂಡಲ್ಲಿ, ಯೋಜನಾ ಪ್ರಾಧಿಕಾರವು ನೀಡಿರುವ ಅನುಮೋದನೆಯು ತನ್ನಿಂದ ತಾನೇ ಸ್ವಯಂಚಾಲಿತವಾಗಿ ರದ್ದಾಗುತ್ತದೆ.

ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 15(4) ರ ಅಡಿಯಲ್ಲಿ ಅಗತ್ಯ ಕ್ರಮ ಜರುಗಿಸಲಾಗುವುದು.

12/12/2017

**ಸದಸ್ಯ ಕಾರ್ಯದರ್ಶಿಗಳು**
ಉಪನಗರ ವರ್ತುಲ ರಸ್ತೆ (STRR)
ಯೋಜನಾ ಪ್ರಾಧಿಕಾರ ಹಾಗೂ
ಮಹಾನಗರ ಯೋಜಕರು, ಬೆಂ.ಮ.ಪ್ರ.ಪ್ರಾ,
ಬೆಂಗಳೂರು.

ಇವರಿಗೆ,
ಮೆ॥ ಸೌಪರ್ಣಿಕ ಪ್ರಾಜೆಕ್ಟ್ಸ್ ಮತ್ತು ಇನ್‌ಫ್ರಾಸ್ಟ್ರಕ್ಚರ್ ಪ್ರೈ. ಲಿ.
ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಮೀನಾಕ್ಷಿ ರಾಮ್‌ಜಿ
ನಂ.750, 1ನೇ ಮುಖ್ಯರಸ್ತೆ,
'ಸಿ' ಬ್ಲಾಕ್, ಇ.ಪಿ.ಎಸ್. ಬಡಾವಣೆ,
ಬೆಂಗಳೂರು-560 037.